ಕರ್ನಾಟಕಸರ್ಕಾರ

**ಸಹಾಯಕ ನಿರ್ದೇಶಕರು(ಗ್ರೇಡ್-1)ರವರ ಕಛೇರಿ,**

**ಬೆಂಗಳೂರು ದಕ್ಷಿಣ ತಾಲ್ಲೂಕು, ಬನಶಂಕರಿ ಬೆಂಗಳೂರು-560070**

ದೂರವಾಣಿ ಸಂಖ್ಯೆ: 080 26711096 ಇ-ಮೇಲ್ :tswobloresouth@gmail.com

ಸಂ:ಸ.ನಿ./ಬೆಂ(ದ)ತಾ/ಭಾಸವಿವೇ/ 2020-21

ದಿನಾಂಕ: 08/02/2021

## ಸುತ್ತೋಲೆ

ವಿಷಯ: 2020-21 ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ವಿದ್ಯಾರ್ಥಿವೇತನ ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State scholarship portal for Post Matric)ನಿಯಮಾನುಸಾರ ಸಲ್ಲಿಸುವ ಕುರಿತು.

**********

2020-21 ನೇ ಸಾಲಿಗೆ ಪೋಷಕರ ವಾರ್ಷಿಕ ಆದಾಯ 2.50 ಲಕ್ಷದೊಳಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕೆ ಆನ್ ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಲು ಇ-ಆಡಳಿತ ಇಲಾಖೆಯಿಂದ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State Scholarship portal for Post Matric) ದಲ್ಲಿ ಅರ್ಜಿಯನ್ನು ಆಹ್ವಾನಿಸಿದ್ದು, ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಅರ್ಜಿಯನ್ನು ಸಲ್ಲಿಸಲು ತಮ್ಮ ಕಾಲೇಜಿನಲ್ಲಿಯೇ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ವ್ಯವಸ್ಥೆಯನ್ನು ಒದಗಿಸಿ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

**ಆನ್ ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಮೊದಲು ಅರ್ಹ ಇರುವ ವಿದ್ಯಾರ್ಥಿಗಳು ಮತ್ತು ವಿದ್ಯಾಸಂಸ್ಥೆಯವರು ಈ ಕೆಳಗೆ ತಿಳಿಸಿರುವಂತೆ ಕ್ರಮ ವಹಿಸಬೇಕಾಗಿರುತ್ತದೆ.**

**ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಈ ಕೆಳಕಂಡ ವೆಬ್ ಸೈಟನ್ನು ಬಳಸಬೇಕಾಗಿರುತ್ತದೆ.**
**(https://ssp.postmatric.karnataka.gov.in )**

ಮೊದಲನೇ ಬಾರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ತಮ್ಮ ವಿದ್ಯಾರ್ಥಿವೇತನ ಖಾತೆಯನ್ನು ಸೃಜನೆ ಮಾಡಿಕೊಂಡು ನಂತರ ವಿದ್ಯಾರ್ಥಿಲಾಗಿನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು. ಈಗಾಗಲೇ 2019-20 ನೇ ಸಾಲಿನಲ್ಲಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಮತ್ತೊಮ್ಮೆ ಖಾತೆಯನ್ನು ಸೃಜಿಸುವ ಅವಶ್ಯಕತೆ ಇರುವುದಿಲ್ಲ ಅಂತಹ ವಿದ್ಯಾರ್ಥಿಗಳು ನೇರವಾಗಿ ವಿದ್ಯಾರ್ಥಿಲಾಗಿನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು

**ವಿದ್ಯಾರ್ಥಿವೇತನಕ್ಕೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಈ ಕೆಳಕಂಡ ದಾಖಲಾತಿಗಳ ಅಗತ್ಯವಿರುತ್ತದೆ.**

Caste Certificate issued by Revenue Department with number prefixed with RD

Income Certificate issued by Revenue Department with number prefixed with RD

Aadhaar of Student

Aadhaar of Parents/Guardian

Study / Bonafied certificate

Previous Year Marks Card / Pass Certificate

Fee Receipt(For those who have paid fee to college)

Stipend/Non-Practicing Certificate(For those studying in PG Medical/Dental/AYUSH Courses

UDID Number(For differently abled students)

ಸರ್ಕಾರಿ ಇಲಾಖಾ ವಿದ್ಯಾರ್ಥಿನಿಲಯ/ ಸರ್ಕಾರಿ/ ಖಾಸಗಿ ವಿಶ್ವವಿದ್ಯಾಲಯ/ ಸರ್ಕಾರಿ/ ಖಾಸಗಿ ಕಾಲೇಜು ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು ಹಾಸ್ಟೆಲ್ ಸ್ಕಾಲರ್ ವಿದ್ಯಾರ್ಥಿವೇತನ ಪಡೆಯಲು ಸಂಬಂಧಪಟ್ಟ ಹಾಸ್ಟೆಲ್ ವಾರ್ಡನ್ ವತಿಯಿಂದ SSP-HMIS ಪೋರ್ಟಲ್‌ನಲ್ಲಿ Registration ಮಾಡಿಸುವುದು.

ಮೇಲಿನ ಎಲ್ಲಾ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೆ ಕೂಡಲೆ ವಿತರಿಸಲು ವಿದ್ಯಾಸಂಸ್ಥೆಯವರು ಕ್ರಮ ವಹಿಸುವುದು.

**ಪಿಯುಸಿ/ಡಿಪ್ಲಮೋ/ಡಿಪ್ಲಮೋ ಪ್ಯಾರಮೆಡಿಕಲ್/ಜಿ.ಎನ್.ಎಂ ನರ್ಸಿಂಗ್/ಐಟಿಐ/ಡಿ ಫಾರ್ಮಾ ಹಾಗೂ ಇತರೆ ತತ್ಸಮಾನ ಕೋರ್ಸುಗಳ ವಿದ್ಯಾರ್ಥಿಗಳಿಗೆ ಇ-ದೃಡೀಕರಣದ ಅವಶ್ಯಕತೆ ಇರುವುದಿಲ್ಲ.**

ವಿದ್ಯಾರ್ಥಿವೇತನಕ್ಕೆ ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವ ಮೊದಲು ವಿದ್ಯಾರ್ಥಿಗಳು ತಾವು ಹೊಂದಿರುವ ಬ್ಯಾಂಕ್ ಖಾತೆಗಳಿಗೆ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಜೋಡಣೆ(Sead/Link Aadhaar to Bank Account)ಮಾಡಿಸುವುದು.

ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ ಮತ್ತು ಸಂಸ್ಥೆಯ ಇ-ದೃಡೀಕರಣ(E-Attestation officer) ಅಧಿಕಾಯವರು ದಾಖಲೆಗಳ ದೃಡೀಕರಣ ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು (https://ssp.postmatric.karnataka.gov.in ) ನಲ್ಲಿ ಪಡೆಯಬಹುದಾಗಿರುತ್ತದೆ. ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಎದುರಾದಲ್ಲಿ **ಸಹಾಯವಾಣಿ ಸಂಖ್ಯೆ:080-35254757** ನ್ನು ಸಂಪರ್ಕಿಸುವುದು.

ಯಾವುದೇ ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ದಾಖಲೆಗಳನ್ನು ದೃಡೀಕರಿಸಿಕೊಳ್ಳಲು ಮತ್ತು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗದಿದ್ದಲ್ಲಿ ಆಯಾ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಇ-ದೃಡೀಕರಣ ಅಧಿಕಾರಿಗಳು ನೇರ ಹೊಣೆಗಾರರಾಗಿರುತ್ತಾರೆ ಎಂದು ಈ ಮೂಲಕ ತಿಳಿಯಪಡಿಸಿದೆ.

ಸಹಾಯಕ ನಿರ್ದೇಶಕರು(ಗ್ರೇಡ್-1)
ಸಮಾಜ ಕಲ್ಯಾಣ ಇಲಾಖೆ
ಬೆಂಗಳೂರು ದಕ್ಷಿಣ ತಾಲ್ಲೂಕು

**ಪ್ರತಿಯನ್ನು:**

**ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯ/ಕಾಲೇಜು ಮುಖ್ಯಸ್ಥರುಗಳಿಗೆ ರವಾನಿಸುತ್ತಾ ಇ-ದೃಡೀಕರಣ ಮತ್ತು ವಿದ್ಯಾರ್ಥಿವೇತಕ್ಕೆ ಅರ್ಜಿ ಸಲ್ಲಿಸುವ ಸಂಬಂಧ ಮಾಹಿಯನ್ನು ಪ.ಜಾತಿ/ವರ್ಗದ ವಿದ್ಯಾರ್ಥಿಗಳಿಗೆ ನೀಡಿ ದಿನಾಂಕ15/03/2021ರ ಒಳಗಾಗಿ ಎಲ್ಲಾ ವಿದ್ಯಾರ್ಥಿಗಳು ವಿದ್ಯಾರ್ಥಿವೇತಕ್ಕೆ ಅರ್ಜಿ ಸಲ್ಲಿಸುವಂತೆ ಅಗತ್ಯ ಕ್ರಮವಹಿಸಲು ಕೋರಿದೆ.**